







ದಿನಾಂಕ: 28-03-2023 ರಂದು ಬೆಳಗಾವಿಯ ಸುವರ್ಣ ವಿಧಾನಸೌಧದ ಪಶ್ಚಿಮ ದ್ವಾರದ ಮುಂಭಾಗದ ಆವರಣದಲ್ಲಿ ನಾಡಿನ ಮಹಾ ಚೇತನಗಳಾದ ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್, ವೀರರಾಣಿ ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಸಂಗೊಳ್ಳಿ ರಾಯಣ್ಣ ಅವರ ಪುತ್ಥಳಿಗಳನ್ನು ಅತ್ಯಂತ ವಿಜೃಂಭಣೆಯಿಂದ ಸಡಗರದಿಂದ ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಬಸವರಾಜ್ ಬೊಮ್ಮಾಯಿ ಅವರು ಅನಾವರಣಗೊಳಿಸಿದರು. ಈ ಸಂದರ್ಭದಲ್ಲಿ ಮಾನ್ಯ ಸಭಾಪತಿಗಳಾದ ಶ್ರೀ ಬಸವರಾಜ ಎಸ್ ಹೊರಟ್ಟಿ ಹಾಗೂ ಮಾನ್ಯ ವಿಧಾನ ಸಭಾಧ್ಯಕ್ಷರಾದ ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ, ಮಾನ್ಯ ಲೋಕೋಪಯೋಗಿ ಸಚಿವರಾದ ಶ್ರೀ ಸಿ.ಸಿ ಪಾಟೀಲ್, ಮಾನ್ಯ ಮುಜರಾಯಿ ಸಚಿವರಾದ ಶ್ರೀಮತಿ ಶಶಿಕಲಾ ಜೊಲ್ಲೆ ಹಾಗೂ ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಲಕ್ಷ್ಮಣ ಸವದಿ ಮತ್ತು ಇತರ ಶಾಸಕರು ಭಾಗಿಯಾಗಿದ್ದರು.